ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿನ ಮೂಲ ಸೌಲಭ್ಯಗಳ ಕೊರತೆ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) –

113 (133) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆ ಪ್ರಾರಂಭವಾಗಿ ಎಷ್ಟು ವರ್ಷಗಳು ಸಂದಿವೆ;

(ಆ) ಸದರಿ ಸಂಸ್ಥೆಯಲ್ಲಿ ಇಂದಿಗೂ ಮೂಲ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ರೀತಿ ಮೂಲ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ವಿಳಂಬವಾಗಿರುವುದರಿಂದ ಶೈಕ್ಷಣಿಕ ಗುಣಮಟ್ಟ ಕುಸಿಯುವುದಿಲ್ಲವೇ;

(ಈ) ಸದರಿ ಮೂಲ ಸೌಲಭ್ಯಗಳನ್ನು ಕೂಡಲೇ ಒದಗಿಸಿ ಸಂಸ್ಥೆಯು ಉನ್ನತ ಮಟ್ಟದ ವೈದ್ಯಕೀಯ ಶಿಕ್ಷಣ ನೀಡಲು ಅನುವಾಗುವಂತೆ ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ?